ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 03 ನೇ ಮಾರ್ಚ್, 2020

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಎಂ.ಆರ್.ಪಿ.ಎಲ್, ಯು.ಪಿ.ಸಿ.ಎಲ್. ಗಳಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡುವ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

122 (17) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಎಂ.ಆರ್.ಪಿ.ಎಲ್ ಮತ್ತು ಯು.ಪಿ.ಸಿ.ಎಲ್‌ಗಳಲ್ಲಿ ಎಷ್ಟು ಮಂದಿ ಸ್ಥಳೀಯರಿಗೆ ಉದ್ಯೋಗವವನ್ನು ನೀಡಲಾಗಿದೆ; (ವಿವರಗಳನ್ನು ಒದಗಿಸುವುದು)

(ಆ) ಎಂ.ಆರ್.ಪಿ.ಎಲ್. ಮತ್ತು ಯು.ಪಿ.ಸಿ.ಎಲ್ ಕೈಗಾರಿಕೆಗಳಿಗೆ ರಾಜ್ಯ ಸರ್ಕಾರವು ಎಷ್ಟು ಎಕರೆ ಭೂಮಿಯನ್ನು ಒದಗಿಸಲಾಗಿದೆ; ಯಾವ ದರದಲ್ಲಿ ನೀಡಲಾಗಿದೆ; (ವಿವರ ನೀಡುವುದು)

(ಇ) ಎಂ.ಆರ್.ಪಿ.ಎಲ್. ಮತ್ತು ಯು.ಪಿ.ಸಿ.ಎಲ್ ಕೈಗಾರಿಕೆಗಳಿಗೆ ನೀಡಿದ ಭೂಮಿಯನ್ನು ಬೇರೆ ಕಂಪನಿಗಳಿಗೆ ಮಾರಾಟ/ಗುತ್ತಿಗೆ ಆಧಾರದಲ್ಲಿ ನೀಡಿ ರಿಯಲ್ ಎಸ್ಟೇಟ್ ವ್ಯಾಪಾರ ಮಾಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ಒದಗಿಸುವುದು)

(ಈ) ರಾಜ್ಯದಲ್ಲಿ ಬಂಡವಾಳ ಆಕರ್ಷಿಸಲು ಇಲಾಖೆ ಕೈಗೊಂಡಿರುವ ಯೋಜನೆಗಳು ಯಾವುವು; ಎಷ್ಟು ಉದ್ಯೋಗಗಳನ್ನು ಸೃಷ್ಟಿ ಮಾಡಲು ಉದ್ದೇಶಿಸಲಾಗಿದೆ ? (ವಿವರ ನೀಡುವುದು)